**Akashvani : Bangalore**
**National Bulletin In Kannada**
**23.06.2024 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**23.06.2024 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ೧೮ನೇ ಲೋಕಸಭೆಯ ಮೊದಲ ಅಧಿವೇಶನ ನಾಳೆಯಿಂದ ಆರಂಭ; ನೂತನ ಸಂಸದರಿಗೆ ಹಂಗಾಮಿ ಸ್ಪೀಕರ್ ಭರ್ತೃಹರಿ ಮಹ್ತಬ್ ಪ್ರಮಾಣ ವಚನ ಬೋಧನೆ

೨. ನೀಟ್ ಪರೀಕ್ಷೆ ಪ್ರಕರಣ; ತನಿಖೆಯನ್ನು ಸಿಬಿಐಗೆ ವಹಿಸಿದ ಶಿಕ್ಷಣ ಸಚಿವಾಲಯ

೩. ವಿಶ್ವ ಟೇಬಲ್ ಟೆನಿಸ್ ಕಂಟೆಂಡರ್ ಟೂರ್ನಿ; ಸಿಂಗಲ್ಸ್ ಮತ್ತು ಡಬಲ್ಸ್ ವಿಭಾಗದಲ್ಲಿ ಫೈನಲ್ಸ್ ಪ್ರವೇಶಿಸಿದ ಭಾರತದ ಶ್ರೀಜಾ ಅಕುಲಾ

೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಬಾಂಗ್ಲಾ ವಿರುದ್ಧ ಭಾರತಕ್ಕೆ ೫೦ರನ್‌ಗಳ ಭರ್ಜರಿ ಗೆಲವು

**<><*<><>*><>**

೧೮ನೇ ಲೋಕಸಭೆಯ ಮೊದಲ ಅಧಿವೇಶನ ನಾಳೆಯಿಂದ ಆರಂಭವಾಗಲಿದೆ. ಅಧಿವೇಶನದಲ್ಲಿ ಹೊಸದಾಗಿ ಆಯ್ಕೆಯಾದ ಸಂಸತ್ ಸದಸ್ಯರ ಪ್ರಮಾಣ ವಚನ ನಡೆಯಲಿದೆ. ಹಂಗಾಮಿ ಸ್ಪೀಕರ್ ಆಗಿ ನೇಮಕಗೊಂಡಿರುವ ಬಿಜೆಪಿಯ ಹಿರಿಯ ಸಂಸದ ಭರ್ತೃಹರಿ ಮಹ್ತಾಬ್ ಅವರು ಹೊಸದಾಗಿ ಆಯ್ಕೆಯಾದ ಲೋಕಸಭೆ ಸಂಸದರಿಗೆ ಪ್ರಮಾಣ ವಚನ ಬೋಧಿಸಲಿದ್ದಾರೆ. ನೂತನ ಲೋಕಸಭಾ ಸ್ಪೀಕರ್ ಆಯ್ಕೆ ಇದೇ ೨೬ ರಂದು ನಡೆಯಲಿದ್ದು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇದೇ ೨೭ ರಂದು ಲೋಕಸಭೆ ಮತ್ತು ರಾಜ್ಯಸಭೆಯ ಜಂಟಿ ಸದನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ರಾಜ್ಯಸಭೆಯ ಅಧಿವೇಶನ ಇದೇ ೨೭ರಂದು ಆರಂಭವಾಗಲಿದೆ. ಜುಲೈ ೩ ರಂದು ಸಂಸತ್ ಅಧಿವೇಶನ ಮುಕ್ತಾಯವಾಗಲಿದೆ.

**<><*<><>*><>**

ಬಾಂಗ್ಲಾದೇಶ ಪ್ರಧಾನಿ ಶೇಖ್ ಹಸೀನಾ ಅವರು ನಿನ್ನೆ ಸಂಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಈ ವೇಳೆ

ಆರ್ಥಿಕ ಪಾಲುದಾರಿಕೆ, ರಕ್ಷಣಾ ಕ್ಷೇತ್ರದಲ್ಲಿ ಸಹಕಾರ, ಇಂಧನ ಭದ್ರತೆ ಮತ್ತು ಸಂಪರ್ಕ ಸೇರಿದಂತೆ ಹಲವು ವಲಯಗಳಲ್ಲಿ ಉಭಯ ರಾಷ್ಟ್ರಗಳ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕೆಲಸ ಮಾಡಲು ಉಭಯ ನಾಯಕರು ಬದ್ಧತೆ ವ್ಯಕ್ತಪಡಿಸಿದರು. ಇದೇ ವೇಳೆ ಉಭಯ ನಾಯಕರು ಆರ್ಥಿಕ ಮತ್ತು ಅಭಿವೃದ್ಧಿ ಪಾಲುದಾರಿಕೆ, ಪ್ರಾದೇಶಿಕ ಸಂಪರ್ಕ, ಹಸಿರು ಶಕ್ತಿ, ಡಿಜಿಟಲ್ ಸಂಪರ್ಕಗಳು, ಬಾಹ್ಯಾಕಾಶ ಸಹಯೋಗ ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ಹಂಚಿಕೊಂಡರು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯ ಹೈದಾರಾಬಾದ್ ಹೌಸ್‌ನಲ್ಲಿ ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ವೇಳೆ ಡಿಜಿಟಲ್ ಮತ್ತು ಹಸಿರು ಪಾಲುದಾರಿಕೆ, ಕಡಲ ಸಹಕಾರ, ಆರೋಗ್ಯ ಮತ್ತು ಔಷಧ, ಬಾಹ್ಯಾಕಾಶ, ರೈಲ್ವೆ ಸಂಪರ್ಕ, ವಿಪತ್ತು ನಿರ್ವಹಣೆ ಮತ್ತು ಮೀನುಗಾರಿಕೆ ಕ್ಷೇತ್ರಗಳಲ್ಲಿ ಪರಸ್ಪರ ಒಪ್ಪಂದಕ್ಕೆ ಸಹಿ ಹಾಕಲಾಯಿತು. ನಂತರ ನಡೆದ ಜಂಟಿ ಪತ್ರಿಕಾ ಹೇಳಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಬಾಂಗ್ಲಾದೇಶವು ಭಾರತದ ನೆರೆಹೊರೆ ಮೊದಲು ನೀತಿ, ಆಕ್ಟ್ ಈಸ್ಟ್ ನೀತಿ, ವಿಷನ್ ಸಾಗರ್ ಮತ್ತು ಇಂಡೋ-ಪೆಸಿಫಿಕ್ ವಿಷನ್ ನೀತಿಗಳ ಸಂಗಮದಲ್ಲಿದೆ ಎಂದು ಹೇಳಿದರು. ಬಾಂಗ್ಲಾದೇಶದಲ್ಲಿರುವ ಜನರಿಗೆ ವೈದ್ಯಕೀಯ ಚಿಕಿತ್ಸೆಗಾಗಿ ಭಾರತವು ಇ-ವೈದ್ಯಕೀಯ ವೀಸಾ ಸೌಲಭ್ಯವನ್ನು ಪ್ರಾರಂಭಿಸಲಿದೆ. ಉಭಯ ದೇಶಗಳು ಸಂಪರ್ಕ, ವಾಣಿಜ್ಯ, ಡಿಜಿಟಲ್ ಮತ್ತು ಇಂಧನ ಸಂಪರ್ಕ ಕ್ಷೇತ್ರಗಳ ಮೇಲೆ ಹೆಚ್ಚು ಗಮನ ಹರಿಸುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಬಾಂಗ್ಲಾದೇಶ ಪ್ರಧಾನಿ ಶೇಖ್ ಹಸೀನಾ ಮಾತನಾಡಿ, ಭಾರತವು ವಿಶ್ವಾಸಾರ್ಹ ಸ್ನೇಹಿತ ಮತ್ತು ಪ್ರಾದೇಶಿಕ ಪಾಲುದಾರ ರಾಷ್ಟ್ರವಾಗಿದೆ ಎಂದು ಹೇಳಿದರು. ಉಭಯ ದೇಶಗಳ ನಡುವಿನ ಸೌಹಾರ್ದ ಸಂಬಂಧವನ್ನು ಮತ್ತಷ್ಟು ಬಲಪಡಿಸಲು ಬಾಂಗ್ಲಾದೇಶಕ್ಕೆ ಭೇಟಿ ನೀಡುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಇದೇ ವೇಳೆ ಆಹ್ವಾನ ನೀಡಿದರು.

<><*<><>*><>

ಶಿಕ್ಷಣ ಸಚಿವಾಲಯ ೨೦೨೪ರ ನೀಟ್ ಯುಜಿ ಪರೀಕ್ಷೆಯಲ್ಲಿನ ಅಕ್ರಮದ ಕುರಿತು ಸಮಗ್ರ ತನಿಖೆಯನ್ನು ಸಿಬಿಐಗೆ ವಹಿಸಿದೆ. ಪರೀಕ್ಷೆಗಳ ಪಾವಿತ್ರ್ಯತೆ ಮತ್ತು ವಿದ್ಯಾರ್ಥಿಗಳ ಹಿತಾಸಕ್ತಿ ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಯಾವುದೇ ವ್ಯಕ್ತಿ ಅಥವಾ ಸಂಸ್ಥೆ ಅಕ್ರಮದಲ್ಲಿ ಭಾಗಿಯಾಗಿರುವುದು ಕಂಡುಬಂದರೆ ಕಠಿಣ ಕ್ರಮವನ್ನು ಎದುರಿಸಬೇಕಾಗುತ್ತದೆ ಎಂದು ಸಚಿವಾಲಯ ಪುನರುಚ್ಚರಿಸಿದೆ. ಸಾರ್ವಜನಿಕ ಪರೀಕ್ಷೆಗಳಲ್ಲಿ ಅಕ್ರಮ ವಿಧಾನಗಳನ್ನು ತಡೆಗಟ್ಟಲು ಕೇಂದ್ರ ಸರ್ಕಾರ ಸಾರ್ವಜನಿಕ ಪರೀಕ್ಷೆ-ಅಕ್ರಮ ವಿಧಾನಗಳ ತಡೆ

ಕಾಯಿದೆ, ೨೦೨೪ ಅನ್ನು ನಿನ್ನೆಯಿಂದ ಜಾರಿಗೊಳಿಸಿದೆ. ಏತನ್ಮಧ್ಯೆ, ಸ್ಪರ್ಧಾತ್ಮಕ ಪರೀಕ್ಷೆಗಳ ಸಮಗ್ರತೆಗೆ ಸಂಬಂಧಿಸಿದಂತೆ ಇತ್ತೀಚೆಗೆ ವರದಿಯಾಗುತ್ತಿರುವ ಆರೋಪಗಳನ್ನು ಗಮನದಲ್ಲಿಟ್ಟುಕೊಂಡು ಇಂದು ನಡೆಯಬೇಕಿದ್ದ ನೀಟ್-ಪಿಜಿ ಪ್ರವೇಶ ಪರೀಕ್ಷೆಯನ್ನು ಮುಂದೂಡಲಾಗಿದೆ. ಪರೀಕ್ಷೆಯ ಪರಿಷ್ಕೃತ ದಿನಾಂಕವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮತ್ತು ಪರೀಕ್ಷಾ ಪ್ರಕ್ರಿಯೆಯ ಪಾವಿತ್ರ್ಯತೆಯನ್ನು ಕಾಪಾಡಿಕೊಳ್ಳಲು ವೈದ್ಯಕೀಯ ವಿದ್ಯಾರ್ಥಿಗಳ ರಾಷ್ಟ್ರೀಯ ಪರೀಕ್ಷಾ ಮಂಡಳಿಯು ನಡೆಸುವ ನೀಟ್-ಪಿಜಿ ಪ್ರವೇಶ ಪರೀಕ್ಷೆಯ ಪ್ರಕ್ರಿಯೆಗಳ ಸಮಗ್ರ ವಿಶ್ಲೇಷಣೆ ನಡೆಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ರಾಷ್ಟ್ರೀಯ ಪರೀಕ್ಷಾ ಸಂಸ್ಥೆ -ಎನ್‌ಟಿಎ ಯಿಂದ ಪರೀಕ್ಷೆಗಳನ್ನು ಪಾರದರ್ಶಕ, ಸುಗಮ ಮತ್ತು ನ್ಯಾಯಯುತವಾಗಿ ನಡೆಸುವುದನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಶಿಕ್ಷಣ ಸಚಿವಾಲಯವು ಇಸ್ರೋ ಮಾಜಿ ಅಧ್ಯಕ್ಷ ಡಾ.ಕೆ.ರಾಧಾಕೃಷ್ಣನ್ ಅವರ ಅಧ್ಯಕ್ಷತೆಯಲ್ಲಿ ಏಳು ಸದಸ್ಯರ ಉನ್ನತ ಮಟ್ಟದ ತಜ್ಞರ ಸಮಿತಿಯನ್ನು ರಚಿಸಿದೆ. ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ (ಎನ್‌ಟಿಎ) ಯಿಂದ ಪರೀಕ್ಷೆಗಳನ್ನು ಪಾರದರ್ಶಕ, ಸುಗಮ ಮತ್ತು ನ್ಯಾಯಯುತವಾಗಿ ನಡೆಸುವುದನ್ನು ಖಚಿತಪಡಿಸಿಕೊಳ್ಳಲು ಉನ್ನತ ಮಟ್ಟದ ತಜ್ಞರ ಸಮಿತಿಯನ್ನು ರಚಿಸುವ ಶಿಕ್ಷಣ ಸಚಿವಾಲಯದ ನಿರ್ಧಾರವನ್ನು ವಿಶ್ವವಿದ್ಯಾಲಯ ಧನಸಹಾಯ ಆಯೋಗ (ಯುಜಿಸಿ) ಸ್ವಾಗತಿಸಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪರೀಕ್ಷಾ ಪ್ರಕ್ರಿಯೆಯಲ್ಲಿ ಸುಧಾರಣೆಗಳನ್ನು ಶಿಫಾರಸು ಮಾಡುವುದು, ಡೇಟಾ ಭದ್ರತಾ ಪ್ರೋಟೋಕಾಲ್‌ಗಳನ್ನು ಹೆಚ್ಚಿಸುವುದು ಮತ್ತು ಎನ್‌ಟಿಎ ಕಾರ್ಯನಿರ್ವಹಣೆಯನ್ನು ಸುಧಾರಿಸುವುದು ದೇಶದ ರಾಷ್ಟ್ರೀಯ ಪ್ರವೇಶ ಪರೀಕ್ಷೆ ವ್ಯವಸ್ಥೆಯನ್ನು ಬಲಪಡಿಸುತ್ತದೆ ಎಂದು ಅವರು ಉಲ್ಲೇಖಿಸಿದ್ದಾರೆ. ನೀಟ್ ಪರೀಕ್ಷೆಯ ವಿವಾದದ ನಡುವೆ, ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯ (ಎನ್‌ಟಿಎ) ಮಹಾನಿರ್ದೇಶಕ ಸುಬೋಧ್ ಕುಮಾರ್ ಸಿಂಗ್ ಅವರನ್ನು ಹುದ್ದೆಯಿಂದ ತೆಗೆದುಹಾಕಲಾಗಿದೆ. ಇದೇ ವೇಳೆ ಇಂಡಿಯಾ ಟ್ರೇಡ್ ಪ್ರಮೋಷನ್ ಆರ್ಗನೈಸೇಶನ್ ಅಧ್ಯಕ್ಷ ಪ್ರದೀಪ್ ಸಿಂಗ್ ಖರೋಲಾ ಅವರಿಗೆ ಎನ್‌ಟಿಎಯ ಹೆಚ್ಚುವರಿ ಮಹಾನಿರ್ದೇಶಕ ಜವಾಬ್ದಾರಿಯನ್ನು ನೀಡಲಾಗಿದೆ. ಇದರ ನಡುವೆಯೇ  ನೀಟ್-ಯುಜಿ ಪರೀಕ್ಷೆ ೨೦೨೪ ರಲ್ಲಿ ಅಕ್ರಮಗಳ ಆರೋಪಕ್ಕೆ ಸಂಬಂಧಿಸಿದಂತೆ ಬಿಹಾರ ಪೊಲೀಸರು ಜಾರ್ಖಂಡ್‌ನ ದಿಯೋಘರ್ ಜಿಲ್ಲೆಯ ಆರು ಜನರನ್ನು ಬಂಧಿಸಿದ್ದಾರೆ.

<><*<><>*><>

ಕರ್ನಾಟಕ, ಕೇರಳ ಮತ್ತು ಗೋವಾದಲ್ಲಿ ಮುಂದಿನ ೩ ದಿನಗಳಲ್ಲಿ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ೩ ದಿನಗಳಲ್ಲಿ

ಗುಜರಾತ್, ಮಹಾರಾಷ್ಟ್ರ, ಲಕ್ಷದ್ವೀಪ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು ಮತ್ತು ಪುದುಚೆರಿಯಲ್ಲಿ ಗುಡುಗು ಮಿಂಚು ಸಹಿತ ಸಾಧಾರಣ ಮಳೆಯಾಗಲಿದೆ. ಈಶಾನ್ಯ ಭಾರತದ ನಾಗಾಲ್ಯಾಂಡ್, ಮಣಿಪುರ, ಮಿಝೋರಾಂ ಮತ್ತು ತ್ರಿಪುರಾದಲ್ಲಿ ಹಾಗೂ ಪಶ್ಚಿಮ ಬಂಗಾಳ, ಸಿಕ್ಕಿಂ, ಅಸ್ಸಾಂ, ಮೇಘಾಲಯ ಮತ್ತು ಅರುಣಾಚಲಪ್ರದೇಶದಲ್ಲಿ ಮುಂದಿನ ಐದು ದಿನಗಳ ಕಾಲ ಭಾರೀ ಮಳೆಯಾಗಲಿದೆ.  ಏತನ್ಮಧ್ಯೆ, ಪಶ್ಚಿಮ ಉತ್ತರ ಪ್ರದೇಶದ ಕೆಲವೆಡೆ ಇದೇ ೨೪ರ ವರೆಗೆ ಬಿಸಿಗಾಳಿ ಪರಿಸ್ಥಿತಿ ಇರಲಿದ್ದು, ಮುಂದಿನ ಎರಡು ದಿನಗಳಲ್ಲಿ ವಾಯವ್ಯ ಭಾರತದಲ್ಲಿ ಗರಿಷ್ಠ ತಾಪಮಾನ ೩ ರಿಂದ ೪ ಡಿಗ್ರಿ ಸೆಲ್ಸಿಯಸ್ ಏರಿಕೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><*<><>*><>

ನೈಜೀರಿಯಾದ ಲಾಗೋಸ್‌ನಲ್ಲಿ ನಡೆಯುತ್ತಿರುವ ಡಬ್ಲ್ಯೂ ಟಿಟಿ ಕಂಟೆಂಡರ್ ಟೇಬಲ್ ಟೆನ್ನಿಸ್ ಪಂದ್ಯಾವಳಿಯಲ್ಲಿ ಭಾರತದ ಶ್ರೀಜಾ ಅಕುಲಾ ಅವರು ಮಹಿಳಾ ಸಿಂಗಲ್ಸ್ ಮತ್ತು ಮಹಿಳೆಯರ ಡಬಲ್ಸ್ ಪಂದ್ಯದಲ್ಲಿ ಫೈನಲ್ ಹಂತಕ್ಕೆ ತಲುಪಿದ್ದಾರೆ.  ನಿನ್ನೆ ನಡೆದ ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಡಬ್ಲ್ಯೂ ಟಿಟಿ ಕಂಟೆಂಡರ್ ವಿಭಾಗದಲ್ಲಿ ಫೈನಲ್ ಹಂತಕ್ಕೇರಿದ ಮೊದಲ ಭಾರತೀಯಳು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಮೊದಲ ಸಿಂಗಲ್ಸ್ ಸೆಮಿಫೈನಲ್ ಪಂದ್ಯದಲ್ಲಿ ಶ್ರೀಜಾ ಸುತೀರ್ಥಾ ಮುಖರ್ಜಿ ಅವರನ್ನು ೩-೨ ಸೆಟ್‌ಗಳಿಂದ ಮಣಿಸುವ ಮೂಲಕ ಫೈನಲ್‌ಗೆ ಲಗ್ಗೆ ಇಟ್ಟರು. ಇಂದು ಸಂಜೆ ಶ್ರೀಜಾ ಮತ್ತು ಡಿಂಗ್ ಯೀಜಿ ಅವರ ನಡುವೆ ಹಣಾಹಣಿ ನಡೆಯಲಿದೆ.  ಮಹಿಳಾ ಡಬಲ್ಸ್ ವಿಭಾಗದಲ್ಲಿ ಶ್ರೀಜಾ ಮತ್ತು ಅರ್ಚನಾ ಗಿರೀಶ್ ಕಾಮತ್ ಜೋಡಿ  ಅವರು ತಮ್ಮ ಸಹವರ್ತಿ ಜೋಡಿ ಐಹಿಕಾ ಮುಖರ್ಜಿ ಮತ್ತು ಸುತೀರ್ಥಾ ಅವರ ಎದುರು ೩-೦ ಅಂತರದಲ್ಲಿ ಗೆಲುವು ದಾಖಲಿಸಿದೆ. ಇಂದು ಸಂಜೆ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಶ್ರೀಜಾ ಮತ್ತು ಅರ್ಚನಾ ಜೋಡಿ ದಿಯಾ ಪರಾಗ್ ಚಿತಾಲೆ ಹಾಗೂ ಯಶಸ್ವಿನಿ ಘೋರ್ಪಡೆ, ವಿರುದ್ಧ ಸೆಣಸಲಿದೆ.  ಪುರುಷರ ಡಬಲ್ಸ್‌ನಲ್ಲಿ ಹರ್ಮಿತ್ ದೇಸಾಯಿ ಹಾಗೂ ಮಾನವ್ ವಿಕಾಸ್ ಠಕ್ಕರ್ ಜೋಡಿ ಚೀನಾದ ಕಾಂಗ್ ಯೂಡ್ ಮತ್ತು ನಿಂಗ್ ಕ್ಷಿಯಾನ್‌ಕುನ್ ಜೋಡಿಯನ್ನು ಮಣಿಸಿ ಸೆಮಿಫೈನಲ್ ಹಂತಕ್ಕೆ ತಲುಪಿದೆ. ಈ ಜೋಡಿ ಇಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ಆತಿಥೇಯ ದೇಶದ  ಒಲಾಜಿಡೆ ಒಮೊಟಾಯೊ ಮತ್ತು ಅಜೀಜ್ ಸೋಲಂಕೆ ಜೋಡಿ ವಿರುದ್ಧ ಸೆಣಸಲಿದೆ.

<><*<><>*><>

ಆಂಟಿಗುವಾದ ಸರ್ ವಿವಿಯನ್ ರಿಚರ್ಡ್ಸ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಸಿಸಿ ಟಿ-೨೦ ಪುರುಷರ ವಿಶ್ವಕಪ್ ಕ್ರಿಕೆಟ್ ನಲ್ಲಿ ಭಾರತ ತಂಡ ಬಾಂಗ್ಲಾದೇಶದ ವಿರುದ್ಧ ೫೦ ರನ್‌ಗಳ ಅಂತರದ

ಭರ್ಜರಿ ಜಯ ಸಾಧಿಸಿದೆ. ಮೊದಲಿಗೆ ಬ್ಯಾಟಿಂಗ್ ಮಾಡಿದ ಭಾರತ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ  ೧೯೬ ರನ್ ಗಳಿಸಿತು. ಭಾರತದ ಪರ ಹಾರ್ದಿಕ್ ಪಾಂಡ್ಯ ಕೇವಲ ೨೭ ಎಸೆತಗಳಲ್ಲಿ ೫೦ ರನ್ ಮಾಡಿದರೆ, ರಿಷಬ್ ಪಂತ್ ೨೮ ಎಸೆತಗಳಲ್ಲಿ ೩೭ ರನ್ ಗಳಿಸಿದರು. ಇದಕ್ಕೆ ಉತ್ತರವಾಗಿ  ಬಾಂಗ್ಲಾದೇಶ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೪೬ ರನ್ ಗಳಿಸಲಷ್ಟೇ ಶಕ್ತವಾಯಿತು. ಪಂದ್ಯದಲ್ಲಿ ಅತ್ಯುತ್ತಮ ಪ್ರದರ್ಶನ ತೋರಿದ ಹಾರ್ದಿಕ್ ಪಾಂಡ್ಯ ಉತ್ತಮ ಆಟಗಾರನೆಂಬ ಖ್ಯಾತಿಗೆ ಭಾಜನರಾದರು.  ಪ್ರಸ್ತುತ ನಡೆಯುತ್ತಿರುವ ಪಂದ್ಯದಲ್ಲಿ ಆಸ್ಟ್ರೇಲಿಯಾ ಮತ್ತು ಆಫ್ಘಾನಿಸ್ತಾನ ತಂಡಗಳು ಮುಖಾಮುಖಿಯಾಗಿವೆ. ಈ ಪಂದ್ಯದಲ್ಲಿ ಆಸ್ಟ್ರೇಲಿಯಾ ತಂಡವನ್ನು ಮಣಿಸಲು ಅಫ್ಘಾನಿಸ್ತಾನ ತಂಡ ವಿಫಲವಾದಲ್ಲಿ ಭಾರತ ಸೆಮಿಫೈನಲ್ ಹಂತಕ್ಕೆ ಅರ್ಹತೆ ಪಡೆಯಲಿದೆ.

<><*<><>*><>

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಮಹಿಳೆಯರ ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ಕೊನೆಯ ಪಂದ್ಯದಲ್ಲಿಂದು ಭಾರತ- ದಕ್ಷಿಣ ಆಫ್ರಿಕಾ ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೧.೩೦ ಕ್ಕೆ ಆರಂಭವಾಗಲಿದೆ. ಈಗಾಗಲೇ ಮೊದಲ ಎರಡು ಪಂದ್ಯಗಳನ್ನು ಗೆದ್ದಿರುವ ಭಾರತೀಯ ಮಹಿಳಾ ತಂಡ ಸರಣಿಯನ್ನು ತನ್ನದಾಗಿಸಿಕೊಂಡಿದೆ.

<><*<><>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>